1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರಃ 667/2025

ಚಾಸಾಃ11 ಪ್ರಾಸಾಃ8

ದಿನಾಂಕಃ 28.01.2026

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಘವೇಂದ್ರ |
| ತಂದೆಯ ಹೆಸರು | : | ಶೇಷು ಮರಕಾಲ |
| ವಯಸ್ಸು | : | 47 ವರ್ಷ |
| ಉದ್ಯೋಗ | : | ಮುಖ್ಯ ಪೇದೆ |
| ವಾಸ ಸ್ಥಳ | : | ಶಿರಿಯಾರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ನಾನು ದಿಃ 14-07-2023 ರಿಂದ ಇಲ್ಲಿಯವರೆಗೂ ಕುಂದಾಪುರದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 17-03-2025 ರಂದು ರಾತ್ರಿ 8-15 ಗಂಟೆ ಸಮಯಕ್ಕೆ ಠಾಣಾ ಪ್ರಭಾರದಲ್ಲಿರುವಾಗ ಚಾಸಾ-10 ರವರು ಠಾಣೆಗೆ ಹಾಜರಾಗಿ ಚಾಸಾ-1 ರವರಿಂದ ಕುಂದಾಪುರ ಸರಕಾರಿ ಆಸ್ಪತ್ರೆಯಲ್ಲಿ ಪಡೆದ ಲಿಖಿತ ದೂರನ್ನು ಹಾಜರುಪಡಿಸಿದ್ದು ಅದನ್ನು ಪಡೆದು ಠಾಣಾ ಅಪರಾಧ ಕ್ರಮಾಂಕ 17/2025 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೂ ಮತ್ತು ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ.

ಸದ್ರಿ ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿಪಿ-8 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-12ರವರಿಗೆ ಹಸ್ತಾಂತರಿಸಿರುತ್ತೇನೆ.

**<u>ವಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎಸ್ ಜಿ ಎಸ್ ರವರಿಂದಃ</u>**

ಆರೋಪಿತರ ತಾಯಿ ದಾಖಲಿಸಿದ ದೂರಿನ ಆಧಾರದ ಮೇಲೆ ಈ ಪ್ರಕರಣದ ಪಿರ್ಯಾದುದಾರರ ವಿರುದ್ದ ಪ್ರಕರಣ ದಾಖಲಾಗಿದೆ ಎಂದರೆ ಇರಬಹುದು. ನಿಪಿ-1ನ್ನು ಚಾಸಾ-2 ರವರು ಬರೆದಿರುತ್ತಾರೆ. ಆ ಬಗ್ಗೆ ನಿಪಿ-8 ರಲ್ಲಿ ಉಲ್ಲೇಖಿಸಿಲ್ಲ. ಪ್ರ.ವ.ವರದಿಯನ್ನು ದಾಖಲಿಸಿದ್ದು ಹೊರತುಪಡಿಸಿ ಬೇರೆ ಯಾವುದೇ ತನಿಖೆಯನ್ನು ನಾನು ಕೈಗೊಂಡಿಲ್ಲ. ಪ್ರ.ವ.ವರದಿ ದಾಖಲಿಸುವ ಪೂರ್ವದಲ್ಲಿ ಮಾಹಿತಿ ಬಗ್ಗೆ ನಾನು ಯಾವುದೇ ಪರಾಂಪರನೆ ಮಾಡಿರುವುದಿಲ್ಲ. ನಿಪಿ-1 ರಲ್ಲಿರುವ ಉಲ್ಲೇಖಿಸಿರುವ ಘಟನೆ ಬಾಬ್ತು ಯಾವುದೇ ಪ್ರಕರಣವಿಲ್ಲದೆ ಅದನ್ನು ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u>** <u>ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**